ಶ್ರೀ ಹಾಲರಾಮೇಶ್ವರ ಕ್ಷೇತ್ರದ ಅಭಿವೃದ್ಧಿ

೭೪೪. ಶ್ರೀ ರಾಮದಾಸ್ (ಹೊಸದುರ್ಗ).—ಮಾನ್ಯ ಧಾರ್ಮಿಕ ಮತ್ತು ದತ್ತಿ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಹೊಸದುರ್ಗ ತಾಲ್ಲೂಕು ಮಾಡದಕೆರೆ ಹೋಬಳಿ, ಪ್ರಸಿದ್ಧ ಶ್ರೀ ಹಾಲುರಾಮೇಶ್ವರ ಕ್ಷೇತ್ರ ಅಭಿವೃದ್ಧಿಗೊಳಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ ?

ಆ) ಹಾಗಿದ್ದಲ್ಲಿ ಈ ಬಗ್ಗೆ ಕೈಗೊಂಡ ಹಾಗೂ ಕೈಗೊಳ್ಳಲಿರುವ ಅಭಿವೃದ್ಧಿ ಕಾರ್ಯಕ್ರಮ ಗಳೇನು ?

ಶ್ರೀ ಅಮರನಾಥ ಶೆಟ್ಟಿ (ಮುಜರಾಯಿ ಮಂತ್ರಿಗಳು).—

ಅ) ಮತ್ತು ಆ) ಕ್ರಮ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುವುದು.

ಹೊಸದುರ್ಗ ತಾಲ್ಲೂಕಿನ ಸರ್ಕಾರಿ ಜಮೀನಿನ ಬಗರ್‌ಹುಕುಂ ಸಾಗುವಳಿ ಸಕ್ರಮೀಕರಣಗೊಳಿಸುವುದು

೭೪೫. ಶ್ರೀ ಜಿ. ರಾಮದಾಸ್ (ಹೊಸದುರ್ಗ).—ಮಾನ್ಯ ಕಂದಾಯ ಹಾಗೂ ಯೋಜನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬಗರ್‌ಹುಕುಂ ಸಾಗುವಳಿ ಜಮೀನು ವಿತರಣೆ ಬಗ್ಗೆ ಹೊಸದುರ್ಗ ತಾಲ್ಲೂಕಿನಲ್ಲಿ ಯಾವು ದಾದರೂ ಪ್ರಕರಣದ ಬಗ್ಗೆ ನ್ಯಾಯಾಲಯ ತೀರ್ಪು ನೀಡಿದೆಯೆ ?

ಆ) ಹಾಗಿದ್ದಲ್ಲಿ, ಈ ತಾಲ್ಲೂಕಿನಲ್ಲಿ ಮಾಡದಕೆರೆ ಹೋಬಳಿ ಹೊನ್ನೇನಹಳ್ಳಿ, ಗಲಬೇನಹಳ್ಳಿ, ಬನಸೀಹಳ್ಳಿ ಮತ್ತು ಕಸಬಾ ಹೋಬಳಿ ಹೇರೂರು ಕಬ್ಬಳ ಹಾಗೂ ಇನ್ನೂ ಕೆಲವು ಗ್ರಾಮಗಳಲ್ಲಿ ಬಗರ್‌ಹುಕುಂ ಸಾಗುವಳಿ ಭೂಮಿ ವಿತರಣೆ ಬಗ್ಗೆ ಸರ್ಕಾರವು ಏನು ಕ್ರಮ ತೆಗೆದುಕೊಂಡಿದೆ;

ಇ) ಹೊಸದುರ್ಗ ಕಂದಾಯ ಅಧಿಕಾರಿಗಳ ನಿರ್ಲಕ್ಷತೆಯಿಂದ ಬಗರ್‌ಹುಕುಂ ಸಾಗುವಳಿದಾರರ ಸಮಸ್ಯೆ ಕಾರ್ಯ ನಿಧಾನವಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ?

ಈ) ಹಾಗಿದ್ದಲ್ಲಿ ಇಲ್ಲಿನ ಅರ್ಹ ರೈತರಿಗೆ ಜಮೀನು ಪಾಯಂಗೊಳಿಸಲು ಸರ್ಕಾರವು ಕೈಗೊಂಡ ಕ್ರಮವೇನು ?

ಶ್ರೀ ಎಸ್. ಆರ್. ಬೊಮ್ಮಾಯಿ (ಕಂದಾಯ ಹಾಗೂ ಯೋಜನಾ ಮಂತ್ರಿಗಳು).—

ಅ) ಹೌದು.

ಆ) ಹೊಸದುರ್ಗ ತಾಲ್ಲೂಕಿನ ಮಾಡದಕೆರೆ ಹೋಬಳಿ ಹೊನ್ನೇನಹಳ್ಳಿ, ಗಲಬೇನಹಳ್ಳಿ, ಬನಸೀಹಳ್ಳಿ ಮತ್ತು ಕಸಬಾ ಹೋಬಳಿ, ಹೇರೂರು, ಕಬ್ಬಳ ಹಾಗೂ ಇನ್ನೂ ಕೆಲವು ಗ್ರಾಮಗಳಲ್ಲಿ ಬಗರ್‌ಹುಕುಂ ಸಾಗುವಳಿಗಳನ್ನು ೨೬೮ ಜನರಿಗೆ ೪೯೨–೮೭ ಎಕರೆ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರನ್ನು ಹೊರತುಪಡಿಸಿ ಇತರೆಯರು) ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ೮೨೭ ಜನರಿಗೆ ೧೨೫೬ ಎಕರೆ ಜಮೀನನ್ನು ಸಕ್ರಮೀಕರಣಗೊಳಿಸಲಾಗಿದೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.